IV. ಶ್ರೀ ವಿನಯ್‌ಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:–
ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 48(5)ರ ಮೇರೆಗೆ:

1. ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ 2013–14ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

ಅಧ್ಯಕ್ಷರು: ಮಂಡಿಸಲಾಗಿದೆ.

3. ಅರ್ಜಿಯನ್ನೊಪ್ಪಿಸುವುದು

ಶ್ರೀ ಹೆಚ್.ವೈ. ಮೇಟಿ (ಬಾಗಲಕೋಟೆ): ಮಾನ್ಯ ಅಧ್ಯಕ್ಷರೆ, ಐತಿಹಾಸಿಕ ಪ್ರಸಿದ್ಧ ಪ್ರವಾಸಿ ಕೇಂದ್ರವಾಗಿರುವ ರಾಮದುರ್ಗ–ಬಾದಮಿ–ಪಟ್ಟದಕಲ್ಲು–ಐಹೊಳೆ–ಕಮತಗಿವರೆಗಿನ ರಾಜ್ಯ ಹೆದ್ದಾರಿಯನ್ನು ದುರಸ್ತಿಪಡಿಸುವ ಬಗ್ಗೆ ಅರ್ಜಿಯನ್ನು ಸದನಕ್ಕೆ ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಗಿದೆ.

4. ವರದಿಗಳನ್ನೊಪ್ಪಿಸುವುದು

1) ಶ್ರೀ ಮಾಲೀಕಯ್ಯ ವಿ.ಗುತ್ತೇದಾರ್ (ಅಧ್ಯಕ್ಷರು, ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿ) ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ ಅಧ್ಯಕ್ಷನಾದ ನಾನು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮಕ್ಕೆ ಸಂಬಂಧಿಸಿದ ಸಮಿತಿಯ 130ನೇ ವರದಿಯನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಗಿದೆ.

2) ಶ್ರೀ ಗೋವಿಂದ ಎಂ. ಕಾರಜೋಳ (ಅಧ್ಯಕ್ಷರು, ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ) 14 ನೇ ವಿಧಾನ ಸಭೆಯ 2014–15ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಅಧ್ಯಕ್ಷನಾದ ನಾನು ಆರ್ಥಿಕ ಇಲಾಖೆಗೆ

ಸಂಬಂಧಿಸಿದ ಹೊಸ ಸೇವೆಗಳು, ಹೊಸ ಸೇವಾ ಸಾದನಗಳಾದ ಆರ್ಥಿಕ ಮಾನದಂಡಗಳ ಪರಿಷ್ಕರಣೆಯ ಬಗ್ಗೆ ಸಮಿತಿಯ ಶಿಫಾರಸ್ಸುಗಳನ್ನೊಳಗೊಂಡ ನಾಲ್ಕನೇ ವರದಿಯನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಗಿದೆ.

5. ವಿತ್ತೀಯ ಕಾರ್ಯಕಲಾಪ

ಶ್ರೀ ಹೆಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) :– ಮಾನ್ಯ ಅಧ್ಯಕ್ಷರೆ, 2014–15 ನೇ ಸಾಲಿನ ಪೂರಕ ಅಂದಾಜುಗಳ (ಎರಡನೇ ಕಂತು) ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಗಿದೆ.

ಶ್ರೀ ಹೆಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) :– ಮಾನ್ಯ ಅಧ್ಯಕ್ಷರೆ, 2014–15 ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯ ವಾರ್ಷಿಕ ಪರಿಶೀಲನೆ ವರದಿಯನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಗಿದೆ.